# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 900 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23.02.2024 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಶ್ವಕರ್ಮ ಸಮಾಜದ ಬಡಮಕ್ಕಳ ವಿದ್ಯಾಭ್ಯಾಸದ ಉದ್ದೇಶದಿಂದ 4 ವಸತಿ ನಿಲಯಗಳನ್ನು ಮೈಸೂರು ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ ಕ್ರಮವಾಗಿ 2 ವಸತಿ ನಿಯಲಯಗಳನ್ನು ನಿರ್ಮಿಸುವುದಾಗಿ ಸರ್ಕಾರ ಘೋಷಿಸಿದ್ದು, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು: | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 2445 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ 228661 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. ಮೈಸೂರು ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಒಟ್ಟು 220 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಒಟ್ಟು 20214 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. ಸದರಿ ವಿದ್ಯಾರ್ಥಿ ನಿಲಯಗಳಲ್ಲಿ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಗೂ ಸಹ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ವಿಶ್ವಕರ್ಮ ಸಮುದಾಯಗಳ ವಿದ್ಯಾರ್ಥಿಗಳನ್ನು ಒಳಗೊಂಡಂತೆ ಎಲ್ಲಾ ಹಿಂದುಳಿದ ವರ್ಗಗಳ ಸಮುದಾಯಗಳ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ.<br><br>ವಿಶ್ವಕರ್ಮ ಸಮುದಾಯವನ್ನು ಒಳಗೊಂಡಂತೆ ಜಾತಿವಾರು ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಆ) | ವಸತಿ ನಿಲಯಗಳನ್ನು ನಿರ್ಮಿಸಲು ಸರ್ಕಾರ ನಿಗದಿಪಡಿಸಿರುವ ಅನುದಾನವೆಷ್ಟು, ವಸತಿ ನಿಲಯದ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆಯೇ? ಇಲ್ಲದಿದ್ದಲ್ಲಿ ಎಂದಿನಿಂದ ಪ್ರಾರಂಭಿಸಲಾಗುವುದು : | |
| ಇ) | ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ, ರೂಪಿಸಿದ್ದಲ್ಲಿ ಮಾಹಿತಿ ನೀಡುವುದು. | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಗೂ ಸೇರಿದಂತೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು / ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>1. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ನಿರ್ವಹಣೆ.<br>2. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ನಿರ್ವಹಣೆ.<br>3. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ.<br>4. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ.<br>5. ಆಹಾರ ಮತ್ತು ವಸತಿ ಯೋಜನೆ-ವಿದ್ಯಾಸಿರಿ.<br>6. ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ.<br>7. ಪಿಹೆಚ್‌ಡಿ ವಿದ್ಯಾರ್ಥಿಗಳಿಗೆ ಫೆಲೋಶಿಪ್.<br>8. JEE / NEET ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ. |

...2..

| | | |
|---|---|---|
| | | ಮುಂದುವರೆದು, ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಠಿಯಿಂದ ಕರ್ನಾಟಕ ವಿಶ್ವಕರ್ಮ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿಯಲ್ಲಿ ಪ್ರತಿ ವಿದ್ಯಾರ್ಥಿಗೆ ರೂ.1.00 ಲಕ್ಷಗಳ ಶೈಕ್ಷಣಿಕ ಸಾಲ ಹಾಗೂ ವಿದೇಶಿ ವ್ಯಾಸಂಗ ಯೋಜನೆಯಡಿ ಪ್ರತಿ ವಿದ್ಯಾರ್ಥಿಗೆ ತಲಾ ರೂ.10.00 ಲಕ್ಷಗಳ ಸಾಲ ಸೌಲಭ್ಯವನ್ನು ನೀಡಲಾಗುತ್ತಿದೆ. |

**ಸಂಖ್ಯೆ: ಬಿಸಿಡಬ್ಲ್ಯೂ 203 ಬಿಎಂಎಸ್ 2024**

**(ಶಿವರಾಜ .ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.